## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮಕ್ಕಳಿಗೆ ಮಂಜೂರು ಮಾಡಿರುವ ಆಶ್ರಮ ಶಾಲೆಗಳನ್ನು ಕೊಪ್ಪಳ ಹಾಗೂ ಚಿಕ್ಕಮಗಳೂರು ಜಿಲ್ಲೆ ವರ್ಗಾಯಿಸಿ ಆದೇಶ ಹೊರಡಿಸುವ ಬಗ್ಗೆ

ಓದಲಾಗಿದೆ:- (1) ಆದೇಶ ಸಂ:ಸಕಇ 234 ಬಿಎಂಎಸ್ 2007, ದಿ:21-09-2007
(2)ಆದೇಶ ಸಂ:ಸಕಇ 361 ಬಿಎಂಎಸ್ 2007, ದಿ:12;-12-2007.
(3)ಪತ್ರ ಸಂ:ಹಿಂವಕನಿ/ಅಮಾಜ-1/ಸಿಆರ್-24/2009-10,ದಿ:18-3-10.

***

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಅಲೆಮರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಕಾರ್ಯಕ್ರಮಗಳನ್ನು ರೂಪಿಸಿ,ಜಾರಿಗೊಳಸಲು ಅದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಬೆಳಗಾಂ, ಮೈಸೂರು, ಗುಲ್ಬರ್ಗಾ ಹಾಗೂ ತುಮಕೂರು ಜಿಲ್ಲೆಗೆ 125 ಸಂಖ್ಯಾಬಲದ 4 ಆಶ್ರಮ ಶಾಲೆಗಳನ್ನು ಮಂಜೂರು ಮಾಡಿ, ಈ ಸಂಬಂಧವಾಗಿ ಹಣವನ್ನು ಬಿಡುಗಡೆ ಮಾಡಲಾಗಿದೆ.

ಮೇಲ ಓದಲಾದ ಕ್ರಮ ಸಂಖ್ಯೆ (3) ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಬೆಳಗಾಂ ಹಾಗೂ ಗುಲ್ಬರ್ಗಾ ಜಿಲ್ಲೆಗಳಲ್ಲಿ ಆಶ್ರಮ ಶಾಲೆ ಕಾರ್ಯ ನಿರ್ವಹಿಸುತ್ತಿದ್ದು, ಮೈಸೂರು ಹಾಗೂ ತುಮಕೂರು ಜಿಲ್ಲೆಯಲ್ಲಿ ಅಲೆಮಾರಿ ಮಕ್ಕಳು ಆಶ್ರಮ ಶಾಲೆಗೆ ಸೇರಲು ಒಪ್ಪುತ್ತಿಲ್ಲ. ಈ ಜನಾಂಗದ ಪೋಷಕರನ್ನು ಎಷ್ಟೇ ಮನವೊಲಿಸಿದರೂ ಆಶ್ರಮ ಶಾಲೆಗೆ ಸೇರಿಸಲು ಒಪ್ಪುತ್ತಿಲ್ಲವೆಂದು, ಸಂಬಂಧಪಟ್ಟ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳು ವರದಿ ಮಾಡಿದ್ದು, ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣಕ್ಕೆ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಬೀರೂರಿನಲ್ಲಿ ಈ ಎರಡು ಆಶ್ರಮ ಶಾಲೆಗಳನ್ನು ವರ್ಗಾಯಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 130 ಬಿಎಂಎಸ್ 2010**
**ಬೆಂಗಳೂರು ದಿನಾಂಕ: 02-06-2010.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆ ಹಾಗೂ ತುಮಕೂರು ಜಿಲ್ಲೆಗೆ ಮಂಜೂರಾಗಿರುವ ಎರಡು ಆಶ್ರಮ ಶಾಲೆಗಳನ್ನು ಬೇಡಿಕೆ ಇರುವ ಚಿಕ್ಕಮಗಳೂರು ಜಿಲ್ಲೆ, ಕಡೂರ ತಾಲ್ಲೂಕು ಬೀರೂರಿನಲ್ಲಿ ಹಾಗೂ ಕೊಪ್ಪಳ ಜಿಲ್ಲೆ, ಕುಷ್ಟಗಿ ಪಟ್ಟಣಕ್ಕೆ ವರ್ಗಾಯಿಸಿ . ಆದೇಶಿಸಿದೆ

ಈ ಆದೇಶವನ್ನು ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1.ಮಹಾಲೇಖಪಾಲರು,ಕರ್ನಾಟಕ, ಬೆಂಗಳೂರು
2.ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು.
3.ಸಂಬಂಧ ಪಟ್ಟ ಜಿಲ್ಲೆಯ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
4.ರಾಜ್ಯ ಖಜಾನಾಧಿಕಾರಿ,ರಾಜ್ಯ ಹುಜೂರ್ ಖಜಾನೆ,ಬೆಂಗಳೂರು
5.ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಬಿಸಿಎಂ ಇಲಾಖೆ.
6.ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ,ವಿಕಾಸ ಸೌಧ,ಬೆಂಗಳೂರು.
7.ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳಿಗೆ
8.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ